# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೊಂದನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಸೋಮವಾರ, ದಿನಾಂಕ:11ನೇ ಡಿಸೆಂಬರ್, 2023**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

## 02. ಅರ್ಜಿಯನ್ನೊಪ್ಪಿಸುವುದು

**ಶ್ರೀ ಎಸ್.ಎಲ್. ಭೋಜೇಗೌಡ** ಅವರು ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರಂ ಹೋಬಳಿ, ಚಿನ್ನಪ್ಪನಹಳ್ಳಿ ಗ್ರಾಮದ ಸರ್ವೆ ನಂ.1/1, 3/3, 22, 21/1, 21/2 ಮತ್ತು 21/3ರಲ್ಲಿರುವ ಕಾಲುದಾರಿಯ ಅತಿಕ್ರಮವನ್ನು ತೆರವುಗೊಳಿಸಲು ವಿಫಲರಾಗಿರುವ ಕುರಿತು ಅರ್ಜಿಯನ್ನೊಪ್ಪಿಸುವುದು.

## 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಉಮಾಶ್ರೀ, ಭಾರತಿ ಶೆಟ್ಟಿ, ಶರವಣ ಟಿ.ಎ, ಬಿ.ಎಂ. ಫಾರೂಖ್ ಹಾಗೂ ಸಿ.ಎನ್. ಮಂಜೇಗೌಡ** ಅವರುಗಳು ರಾಜ್ಯದಲ್ಲಿ ಕಾನೂನು ಬಾಹಿರವಾಗಿ ಭ್ರೂಣ ಪರೀಕ್ಷೆ ಮತ್ತು ಭ್ರೂಣ ಹತ್ಯೆ ಪ್ರಕರಣಗಳು ವ್ಯಾಪಕವಾಗಿ ಹೆಚ್ಚುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

02. **ಶ್ರೀ ತಿಪ್ಪಣ್ಣಪ್ಪ** ಅವರು ವಿಶ್ವಗುರು ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ಬೆಂಗಳೂರಿನ ಪ್ರತಿಷ್ಠಿತ ಸ್ಥಳದಲ್ಲಿ ಸ್ಥಾಪಿಸುವ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

03. **ಶ್ರೀ ಗೋವಿಂದರಾಜು** ಅವರು ರಾಜ್ಯದಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗುತ್ತಿದ್ದು, ಒಟಿಪಿ, ಕ್ರಿಪ್ಟೋ ಕರೆನ್ಸಿ ಹೂಡಿಕೆ, ಲಕ್ಕಿ ಡ್ರಾ, ಸ್ಕಿಮ್ಮಿಂಗ್, ಉಡುಗೊರೆ ನೆಪ ಸೇರಿದಂತೆ ಹಲವು ಮಾರ್ಗಗಳ ಮೂಲಕ ಸಾರ್ವಜನಿಕರ ಹಣ ವಂಚನೆಯಾಗುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ

**ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ಡಾ: ವೈ.ಎ. ನಾರಾಯಣಸ್ವಾಮಿ, ಶರವಣ ಟಿ.ಎ., ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಇತರರು** ರಾಷ್ಟ್ರೀಯ ಶಿಕ್ಷಣ ನೀತಿ-2020ನ್ನು ರದ್ದುಗೊಳಿಸಿರುವುದರಿಂದ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ತಲೆದೋರಿರುವ ಗೊಂದಲ-ಆತಂಕಗಳ ಗಂಭೀರ ವಿಷಯದ ಕುರಿತು ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ.

## 05. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ, ಮಧು ಜಿ. ಮಾದೇಗೌಡ, ಶಶೀಲ್ ಜಿ. ನಮೋಶಿ ಹಾಗೂ ಎಸ್.ವ್ಹಿ. ಸಂಕನೂರ** ಅವರುಗಳು ಪ್ರತಿ ತಾಲ್ಲೂಕಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳನ್ನು ಕಡಿಮೆ ಮಾಡಲು ಹಾಗೂ ಯಾವುದೇ ಅನುಭವ ತರಬೇತಿ ಇಲ್ಲದ ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳಿಂದ ಪರೀಕ್ಷೆ ನಡೆಸಲು ಉದ್ದೇಶಿಸಿರುವುದರಿಂದ ವಿದ್ಯಾರ್ಥಿಗಳ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವುದಲ್ಲದೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಭಾರವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ಮೇಲುಸ್ತುವಾರಿಗೆ ನೀಡುವುದರಿಂದ ಉದ್ಭವಿಸುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಕರ್ನಾಟಕ ಗ್ರಾಮ ಸ್ವರಾಜ್ ಹಾಗೂ ಪಂಚಾಯತ್ ರಾಜ್ ಕಾಯಿದೆ 1993ರಂತೆ ತ್ರಿಸ್ಥರ ಪಂಚಾಯತ್‌ಗಳಾದ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ಕಾರ್ಯಕ್ರಮಗಳು, ಆಡಳಿತ ಮಾನವ ಸಂಪನ್ಮೂಲಗಳು ಮತ್ತು ಅನುದಾನಗಳನ್ನು ವರ್ಗಾವಣೆ ಮಾಡಿ ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀಯುತರುಗಳಾದ ಡಾ: ತೇಜಸ್ವಿನಿ ಗೌಡ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ, ಕೆ.ಎಸ್. ನವೀನ್, ಸೂರಜ್ ರೇವಣ್ಣ ಹಾಗೂ ಡಿ.ಎಸ್. ಅರುಣ್** ಅವರುಗಳು ಕರ್ನಾಟಕ ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಸುರಕ್ಷೆ ಅಪಾಯದಲ್ಲಿರುವುದರಿಂದ ಸರ್ವಾಂಗೀಣ ಭದ್ರತೆ ಮತ್ತು ರಕ್ಷಣೆ ಒದಗಿಸುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಉತ್ತರ ಕರ್ನಾಟಕದಲ್ಲಿರುವ ನದಿಗಳ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ನದಿಗಳ ಜೋಡಣೆ ಮುಖಾಂತರ ನೀರಾವರಿ ಯೋಜನೆಗಳನ್ನು ಜಾರಿಗೊಳಿಸುವ ಕುರಿತು ಪ್ರಸ್ತಾಪಿಸುವುದು.

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| ಶ್ರೀಯುತರುಗಳಾದ:-<br>**ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** | ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಯನ್ನು ನಿಭಾಯಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು |

## 07. ವಿಶೇಷ ಚರ್ಚೆ

ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತು ವಿಶೇಷ ಚರ್ಚೆ

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಪರಿಶಿಷ್ಠರ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿರುವ ಬಗ್ಗೆ ದಿನಾಂಕ:08.12.2023ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:62(562)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು ಶ್ರೀ **ಛಲವಾದಿ ಟಿ. ನಾರಾಯಣಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**